ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ
ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಪ್ರ.ವಿ. /18-19 ದಿನಾಂಕ: 25-05-2019

# ಪತ್ರಿಕಾ ಪ್ರಕಟಣೆ

ವಿಷಯ: ಕೊಡಗು ಜಿಲ್ಲೆಯಲ್ಲಿ ಸಂಭವನೀಯ ಪ್ರಕೃತಿ ವಿಕೋಪವನ್ನು ಸಮರ್ಪಕವಾಗಿ ಎದುರಿಸುವ ಸಲುವಾಗಿ ದಿ: 29-5-2019ರಂದು ಸೂಕ್ಷ್ಮ ಪ್ರದೇಶಗಳಲ್ಲಿ ರಕ್ಷಣಾ ಕಾರ್ಯದ ಅಣುಕು ಪ್ರದರ್ಶನ ಮಾಡುವ ಬಗ್ಗೆ.

************

ಆಗಸ್ಟ್ 2018 ರಲ್ಲಿ ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಭಾರೀ ಮಳೆಯಿಂದಾಗಿ ಭೂಕುಸಿತ ಹಾಗೂ ಪ್ರವಾಹ ಉಂಟಾಗಿ ಅಪಾರ ಪ್ರಮಾಣದ ಸಾರ್ವಜನಿಕ ಆಸ್ತಿಗಳಿಗೆ ಹಾನಿ, ಮಾನವ ಹಾಗೂ ಜಾನುವಾರುಗಳ ಜೀವ ಹಾನಿಯಾಗಿರುತ್ತದೆ.

ಪ್ರಕೃತಿ ವಿಕೋಪ ಎದುರಾದಲ್ಲಿ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ರಕ್ಷಣಾ ಕಾರ್ಯವನ್ನು ಯಾವ ರೀತಿ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಜಿಲ್ಲಾಡಳಿತದ ಸನ್ನದ್ಧತೆಯನ್ನು ಪರೀಕ್ಷಿಸಲು ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ದಿ:29-5-2019 ರಂದು ಪ್ರಾಕೃತಿಕ ವಿಕೋಪದ ಸನ್ನಿವೇಶಗಳಲ್ಲಿ ಕೈಗೊಳ್ಳಲಾಗುವ ರಕ್ಷಣಾ ಕಾರ್ಯದ ಅಣುಕು ಪ್ರದರ್ಶನವನ್ನು ರಾಜ್ಯ ಕಂದಾಯ ಇಲಾಖೆಯ ವಿಪತ್ತು ನಿರ್ವಹಣಾ ಕೋಶದ ಸಹಯೋಗದೊಂದಿಗೆ ಜಿಲ್ಲಾಡಳಿತದಿಂದ ಏರ್ಪಡಿಸಲಾಗಿದೆ.

ಸದರಿ ಅಣುಕು ಪ್ರದರ್ಶನದಲ್ಲಿ ಕಂದಾಯ ಇಲಾಖೆ, ಭಾರತೀಯ ಸೇನೆಯ ಡೋಗ್ರಾ ರೆಜಿಮೆಂಟ್, ಅಗ್ನಿಶಾಮಕ ಇಲಾಖೆ, ಸಿವಿಲ್ ಡಿಫೆನ್ಸ್ ಕ್ಷಿಪ್ರ ಕಾರ್ಯ ಪಡೆ, ಎಸ್‌ಡಿಆರ್‌ಎಫ್, ಎನ್‌ಡಿಆರ್‌ಎಫ್, ಟೆಲಿಕಾಂ ಇಲಾಖೆಯ ರಾಜ್ಯ ಮಟ್ಟದ ತಂಡಗಳು ಹಾಗೂ ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

ಭಾರತೀಯ ಸರ್ವೇಕ್ಷಣಾ ಇಲಾಖೆಯವರು ತಮ್ಮ ಮಧ್ಯಂತರ ವರದಿಯಲ್ಲಿ ಭೂಕುಸಿತ ಸೂಕ್ಷ್ಮ ಪ್ರದೇಶಗಳೆಂದು ಗುರುತಿಸಿರುವ ಹೆಬ್ಬಟಗೇರಿ ಹಾಗೂ ಕೊಪ್ಪತ್ತೂರು (ಹಟ್ಟಿಹೊಳೆ) ಗ್ರಾಮಗಳಲ್ಲಿ ಅಣುಕು ಪ್ರದರ್ಶನವನ್ನು ಕೈಗೊಳ್ಳಲಾಗುವುದು. ಮೇ 29 ರಂದು ಬೆಳಿಗ್ಗೆ 9:30 ಗಂಟೆಯಿಂದ 12: 00

ಗಂಟೆಯವರೆಗೆ ಹೆಬ್ಬಟಗೇರಿ ಗ್ರಾಮದಲ್ಲಿ ಭೂಕುಸಿತ ಸನ್ನಿವೇಶದಲ್ಲಿನ ರಕ್ಷಣಾ ಕಾರ್ಯದ ಅಣುಕು ಪ್ರದರ್ಶನ ನಡೆಸಲಾಗುವುದು. ನಂತರ ಮಧ್ಯಾಹ್ನ 2:00 ಗಂಟೆಯಿಂದ 4: 00 ಗಂಟೆಯವರೆಗೆ ಹಟ್ಟಿಹೊಳೆಯ ಸೇತುವೆ ಸಮೀಪದ ಹೊಳೆಯಲ್ಲಿ ಪ್ರವಾಹ ಸನ್ನಿವೇಶದ ರಕ್ಷಣಾ ಕಾರ್ಯದ ಅಣುಕು ಪ್ರದರ್ಶನ ಕೈಗೊಳ್ಳಲಾಗುವುದು.

ಜನ ಪ್ರತಿನಿಧಿಗಳು, ಸಾರ್ವಜನಿಕರು, ಸ್ವಯಂ ಸೇವಕರು ಮತ್ತು ಸಂಘ ಸಂಸ್ಥೆಗಳು ಜಿಲ್ಲೆಯಲ್ಲಿ ಪ್ರಕೃತಿ ವಿಕೋಪ ಎದುರಾದಲ್ಲಿ ಸಮರ್ಪಕವಾಗಿ ಎದುರಿಸಲು ಸನ್ನದ್ದರಾಗುವ ದೃಷ್ಠಿಯಿಂದ ಸದರಿ ಅಣುಕು ಪ್ರದರ್ಶನದಲ್ಲಿ ಪಾಲ್ಗೊಳ್ಳಬೇಕಾಗಿ ಕೋರಿದೆ.

**ಜಿಲ್ಲಾಧಿಕಾರಿ**

**ಕೊಡಗು ಜಿಲ್ಲೆ, ಮಡಿಕೇರಿ**